889-B

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ಸಿ.ವಿ ಶ್ರೀನಿವಾಸ್, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಬೇಡರೆಡ್ಡಿಹಳ್ಳಿ ಗ್ರಾಮ ಪಂಚಾಯಿತಿ, ಚಿತ್ರದುರ್ಗ ಜಿಲ್ಲೆ (ಪ್ರಸ್ತುತ ನಿವೃತ್ತ ಕಾರ್ಯನಿರ್ವಾಹಕ ಅಧಿಕಾರಿ) ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತ-2 ರವರಿಗೆ ವಹಿಸಿದ್ದ ಆದೇಶವನ್ನು ಕೆಎಟಿ ಅರ್ಜಿ ಸಂಖ್ಯೆ: 7752/2018ರಲ್ಲಿನ ತೀರ್ಪಿನನ್ವಯ ಹಿಂಪಡೆಯುವ ಬಗ್ಗೆ.

**ಓದಲಾಗಿದೆ:**

1) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ: Compt/Uplok/BD-8561/2015/DRE-1, ದಿನಾಂಕ: 08.11.2017.
2) ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 4 ವಿಸೇಬಿ 2018, ದಿನಾಂಕ: 01.02.2018.
3) ಅಪರ ನಿಬಂಧಕರು ವಿಚಾರಣೆಗಳು-9, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ: ಉಪಲೋಕ್-2/ಡಿಇ/171/2018/ಎಆರ್ಇ-9, ದಿನಾಂಕ: 27.04.2018.
4) ಕರ್ನಾಟಕ ಆಡಳಿತ ನ್ಯಾಯಮಂಡಳಿಯು ಅರ್ಜಿ ಸಂಖ್ಯೆ: 7752/2018ರಲ್ಲಿ ದಿ:28.06.2019ರಂದು ನೀಡಿರುವ ಆದೇಶ.

*****

**ಪ್ರಸ್ತಾವನೆ:-**

ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರು ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಪ್ರಸ್ತಾವನೆಯೊಂದಿಗೆ ಮಾನ್ಯ ಉಪ ಲೋಕಾಯುಕ್ತರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ, 1984ರ ಕಲಂ 12 (3) ರಡಿಯಲ್ಲಿ ಸಲ್ಲಿಸಿರುವ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿ, ಶ್ರೀ ಸಿ.ವಿ ಶ್ರೀನಿವಾಸ್, ನಿವೃತ್ತ ಕಾರ್ಯನಿರ್ವಾಹಕ ಅಧಿಕಾರಿ ಇವರು ಈ ಹಿಂದೆ 2006ನೇ ಸಾಲಿನಲ್ಲಿ ಚಿತ್ರದುರ್ಗ ಜಿಲ್ಲೆ ಚಳ್ಳಕೆರೆ ತಾಲ್ಲೂಕು ಬೇಡರೆಡ್ಡಿಹಳ್ಳಿ ಗ್ರಾಮ ಪಂಚಾಯಿತಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯಾಗಿ ಕಾರ್ಯನಿರ್ವಹಿಸುತ್ತಿದ್ದ ಸಮಯದಲ್ಲಿ ಸದರಿ ಗ್ರಾಮ ಪಂಚಾಯಿತಿಯ ಬಿಲ್ ಕಲೆಕ್ಟರ್ ಶ್ರೀ ಗೋವಿಂದರಾಜು ಇವರ ಪತ್ನಿಯು ನಿವೇಶನ ಹೊಂದಿದ್ದರೂ ಸಹ ಅವರಿಗೆ ಪುನಃ ಅಕ್ರಮವಾಗಿ 02 ನಿವೇಶನಗಳನ್ನು ಮಂಜೂರು ಮಾಡಿರುತ್ತಾರೆಂಬ ಆರೋಪದ ಮೇಲೆ ಈ ಕೆಳಕಂಡ ಆಪಾದಿತ ಅಧಿಕಾರಿ/ ನೌಕರರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಪ್ರಕರಣವನ್ನು ಲೋಕಾಯುಕ್ತ ಸಂಸ್ಥೆಗೆ ವಹಿಸುವಂತೆ ಕೋರಿದ್ದರು.

1) ಶ್ರೀ ಬಿ. ಗೋವಿಂದರಾಜು, ಬಿಲ್ ಕಲೆಕ್ಟರ್, ಬೇಡರೆಡ್ಡಿಹಳ್ಳಿ ಗ್ರಾಮ ಪಂಚಾಯಿತಿ, ಚಿತ್ರದುರ್ಗ ಜಿಲ್ಲೆ.
2) ಶ್ರೀ ಸಿ. ವಿ ಶ್ರೀನಿವಾಸ್, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಬೇಡರೆಡ್ಡಿಹಳ್ಳಿ ಗ್ರಾಮ ಪಂಚಾಯಿತಿ, ಚಿತ್ರದುರ್ಗ ಜಿಲ್ಲೆ.

..2

ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಆಪಾದಿತ ಅಧಿಕಾರಿ/ ನೌಕರರು ತಮ್ಮ ಅಧಿಕಾರ ದುರುಪಯೋಗಪಡಿಸಿಕೊಂಡು ಕರ್ತವ್ಯಲೋಪವೆಸಗಿರುವುದು ಪ್ರಾಥಮಿಕ ತನಿಖೆಯಿಂದ ದೃಢಪಟ್ಟಿದ್ದರಿಂದ, ಸದರಿ ಅಧಿಕಾರಿ/ ನೌಕರರ ವಿರುದ್ಧ ಜಂಟಿ ಇಲಾಖಾ ವಿಚಾರಣೆ ಕೈಗೊಳ್ಳಲು ನಿರ್ಧರಿಸಿ, ಕ.ನಾ.ಸೇ (ವ, ನಿ & ಮೇ) ನಿಯಮಗಳು, 1957ರ ನಿಯಮ 11ರನ್ವಯ ಇಲಾಖಾ ವಿಚಾರಣೆ ನಡೆಸಲು ಶ್ರೀ ಸಿ.ವಿ ಶ್ರೀನಿವಾಸ್ (ನಿವೃತ್ತ) ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳು, 1958ರ ನಿಯಮ 214 (2) (ಬಿ) (i) ರನ್ವಯ ಅನುಮತಿ ನೀಡಿ ಸದರಿಯವರು ಸೇರಿದಂತೆ ಶ್ರೀ ಗೋವಿಂದರಾಜು, ಬಿಲ್ ಕಲೆಕ್ಟರ್ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಪ್ರಕರಣವನ್ನು ಕ.ನಾ.ಸೇ (ವ, ನಿ & ಮೇ) ನಿಯಮಗಳು, 1957ರ ನಿಯಮ 14 (ಎ) ರಡಿ ಮಾನ್ಯ ಉಪ ಲೋಕಾಯುಕ್ತರವರಿಗೆ ವಹಿಸಿ ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ಆದೇಶವನ್ನು ಹೊರಡಿಸಲಾಗಿರುತ್ತದೆ.

ಅದರನ್ವಯ ಮಾನ್ಯ ಉಪ ಲೋಕಾಯುಕ್ತರವರು ಅಪರ ನಿಬಂಧಕರು ವಿಚಾರಣೆಗಳು-9, ಕರ್ನಾಟಕ ಲೋಕಾಯುಕ್ತ ಇವರನ್ನು ವಿಚಾರಣಾಧಿಕಾರಿಯನ್ನಾಗಿ ನೇಮಿಸಿದ್ದ ಮೇರೆಗೆ ಸದರಿ ವಿಚಾರಣಾಧಿಕಾರಿಯವರು ಆಪಾದಿತ ಅಧಿಕಾರಿ/ ನೌಕರರಿಗೆ ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ದೋಷರೋಪಣಾ ಪಟ್ಟಿಯನ್ನು ಜಾರಿ ಮಾಡಿರುತ್ತಾರೆ.

ಏತನ್ಮಧ್ಯೆ, ಶ್ರೀ ಸಿ.ವಿ ಶ್ರೀನಿವಾಸ್, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ಇವರು ಪ್ರಕರಣವನ್ನು ವಿಚಾರಣೆಗಾಗಿ ಮಾನ್ಯ ಉಪ ಲೋಕಾಯುಕ್ತರವರಿಗೆ ವಹಿಸಿದ್ದ ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 4 ವಿಸೇಬಿ 2018, ದಿನಾಂಕ: 01.02.2018 ಮತ್ತು ಅದರನ್ವಯ ಅಪರ ನಿಬಂಧಕರು ವಿಚಾರಣೆಗಳು-9, ಕರ್ನಾಟಕ ಲೋಕಾಯುಕ್ತ ಇವರು ಜಾರಿಗೊಳಿಸಿರುವ ದಿನಾಂಕ: 27.04.2018ರ ದೋಷಾರೋಪಣೆ ಪಟ್ಟಿಯನ್ನು ಪ್ರಶ್ನಿಸಿ, ಮಾನ್ಯ ಕರ್ನಾಟಕ ಆಡಳಿತ ನ್ಯಾಯಮಂಡಳಿಯಲ್ಲಿ ಅರ್ಜಿ ಸಂಖ್ಯೆ: 7752/2018ನ್ನು ದಾಖಲಿಸಿದ್ದರು. ಸದರಿ ಅರ್ಜಿಯ ವಿಚಾರಣೆಯನ್ನು ನಡೆಸಿರುವ ಮಾನ್ಯ ನ್ಯಾಯಮಂಡಳಿಯು ದಿನಾಂಕ: 28.06.2019ರಂದು ಅರ್ಜಿಯನ್ನು ಪುರಸ್ಕರಿಸಿ, ಈ ಕೆಳಕಂಡಂತೆ ತೀರ್ಪು ನೀಡಿರುತ್ತದೆ.

> *"...the application is allowed and the impugned order bearing No. **ಗ್ರಾಅಪ 4 ವಿಸೇಬಿ 2018** dated 01.02.2018 issued by the 1st Respondent as per Annexure-A1 and the impugned Articles of charges vide order bearing No. ಉಪಲೋಕ್-2/ಡಿ.ಇ/171/2018/ಎ.ಆರ್.ಇ-9, dated 27.04.2018 issued by the 2nd Respondent as per Annexure A2, are hereby set-aside, in so far as it relates to the above applicant. However, the Respondent No.1- Government is at liberty to initiate any appropriate proceedings against the applicant herein, if it is permissible in law."*

..3

ಮಾನ್ಯ ನ್ಯಾಯಮಂಡಳಿಯ ಆದೇಶದನ್ವಯ ಪರಿಶೀಲಿಸಲಾಗಿ, ಮಾನ್ಯ ನ್ಯಾಯಮಂಡಳಿಯು ದಿನಾಂಕ: 28.06.2019ರ ಆದೇಶದಲ್ಲಿ, ಈ ಕೆಳಕಂಡ ಅಂಶಗಳನ್ನು ಪರಿಗಣಿಸಿ ಶ್ರೀ ಸಿ.ವಿ. ಶ್ರೀನಿವಾಸ್, ನಿವೃತ್ತ ಕಾರ್ಯನಿರ್ವಾಹಕ ಅಧಿಕಾರಿ ಇವರು ಕೆಎಟಿಯಲ್ಲಿ ದಾಖಲಿಸಿದ್ದ ಅರ್ಜಿ ಸಂಖ್ಯೆ: 7752/2018ನ್ನು ಪುರಸ್ಕರಿಸಿ, ಪ್ರಶ್ನಿತ ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 4 ವಿಸೇಬಿ 2018, ದಿನಾಂಕ: 01.02.2018 ಮತ್ತು ಅಪರ ನಿಬಂಧಕರು ವಿಚಾರಣೆಗಳು-9, ಕರ್ನಾಟಕ ಲೋಕಾಯುಕ್ತ ಇವರು ಜಾರಿಗೊಳಿಸಿರುವ ದಿನಾಂಕ: 27.04.2018ರ ದೋಷಾರೋಪಣೆ ಪಟ್ಟಿಯನ್ನು ತಳ್ಳಿಹಾಕಿ ಆದೇಶಿಸಿರುತ್ತದೆ.

- ಅರ್ಜಿದಾರರ ವಿರುದ್ಧದ ಆರೋಪಗಳು 2006ನೇ ಸಾಲಿಗೆ ಸಂಬಂಧಿಸಿದ್ದು, ಅರ್ಜಿದಾರರು ದಿನಾಂಕ: 30.04.2017ರಲ್ಲಿ ಸೇವೆಯಿಂದ ವಯೋನಿವೃತ್ತಿ ಹೊಂದಿದ್ದರೂ ಸಹ, ಸದರಿಯವರ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ ವಿಚಾರಣೆಯನ್ನು ಕೈಗೊಳ್ಳಲು ಪ್ರಕರಣವನ್ನು ಮಾನ್ಯ ಉಪ ಲೋಕಾಯುಕ್ತರಿಗೆ ವಹಿಸಿ ಪ್ರತಿವಾದಿ-1 ಇವರು ದಿನಾಂಕ: 01.02.2018ರಂದು ಆದೇಶಿಸಿದ್ದಾರೆ ಮತ್ತು ಪ್ರತಿವಾದಿ-2 ರವರು ದಿನಾಂಕ: 27.04.2018ರ ದೋಷಾರೋಪಣ ಪಟ್ಟಿಯನ್ನು ಜಾರಿ ಮಾಡಿರುತ್ತಾರೆ.
- ಅರ್ಜಿದಾರರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 214ರನ್ವಯ ಶಿಸ್ತು ಕ್ರಮ ಕೈಗೊಳ್ಳಲು ಅವಕಾಶವಿದ್ದ 04 ವರ್ಷಗಳ ಕಾಲಾವಧಿಯ ನಂತರ ಅಂದರೆ ದಿನಾಂಕ: 01.02.2018ರ ಆದೇಶದಲ್ಲಿ ಪ್ರಕರಣವನ್ನು ಮಾನ್ಯ ಉಪ ಲೋಕಾಯುಕ್ತರಿಗೆ ವಹಿಸಲಾಗಿದೆ ಮತ್ತು ಲೋಕಾಯುಕ್ತ ಸಂಸ್ಥೆಯಿಂದ ದಿನಾಂಕ: 27.04.2018ರಂದು ದೋಷಾರೋಪಣ ಪಟ್ಟಿಯನ್ನು ಜಾರಿ ಮಾಡಲಾಗಿದ್ದು, ನಿಯಮಗಳನ್ವಯ ಅರ್ಜಿದಾರರ ವಿರುದ್ಧ ಪ್ರತಿವಾದಿ-1 ಸರ್ಕಾರವು ಯಾವುದೇ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ಲೋಕಾಯುಕ್ತರವರಿಗೆ ಪ್ರಕರಣವನ್ನು ವಹಿಸಲು ಅವಕಾಶವಿರುವುದಿಲ್ಲ ಮತ್ತು ಪ್ರತಿವಾದಿ-2 ರವರು ಅರ್ಜಿದಾರರ ವಿರುದ್ಧ ವಿಚಾರಣೆ ನಡೆಸಲು ಮತ್ತು ವರದಿಯನ್ನು ಸಲ್ಲಿಸಲು ಅಧಿಕಾರವಿಲ್ಲವೆಂದು ನಿರ್ಣಯಿಸಿ, ಅರ್ಜಿದಾರರ ಅರ್ಜಿಯನ್ನು ಪುರಸ್ಕರಿಸಿರುತ್ತದೆ.

ಘನ ನ್ಯಾಯಮಂಡಳಿಯು ಶ್ರೀ ಸಿ.ವಿ ಶ್ರೀನಿವಾಸ್, ನಿವೃತ್ತ ಕಾರ್ಯನಿರ್ವಾಹಕ ಅಧಿಕಾರಿ ಇವರು ಕೆಎಟಿಯಲ್ಲಿ ದಾಖಲಿಸಿದ್ದ ಅರ್ಜಿ ಸಂಖ್ಯೆ: 7752/2018ನ್ನು ಪುರಸ್ಕರಿಸಿ, ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 4 ವಿಸೇಬಿ 2018, ದಿನಾಂಕ: 01.02.2018 ಮತ್ತು ಅಪರ ನಿಬಂಧಕರು ವಿಚಾರಣೆಗಳು-9, ಕರ್ನಾಟಕ ಲೋಕಾಯುಕ್ತ ಇವರು ಜಾರಿಗೊಳಿಸಿರುವ ದಿನಾಂಕ: 27.04.2018ರ ದೋಷಾರೋಪಣೆ ಪಟ್ಟಿಯನ್ನು ತಳ್ಳಿಹಾಕಿ ಆದೇಶಿಸಿರುವುದರಿಂದ, ಸದರಿಯವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಪ್ರಕರಣವನ್ನು ಕ.ನಾ.ಸೇ (ವ,ನಿ&ಮೇ) ನಿಯಮಗಳು, 1957ರ ನಿಯಮ 14(ಎ) ರನ್ವಯ ಮಾನ್ಯ ಉಪ ಲೋಕಾಯುಕ್ತ-2ರವರಿಗೆ ವಹಿಸಿ, ಕರ್ನಾಟಕ ನಾಗರೀಕ ಸೇವಾ ನಿಯಮಗಳು, 1958ರ ನಿಯಮ 214 (2) (ಬಿ) (i) ರನ್ವಯ ಸಹಮತಿ ನೀಡಿದ್ದ ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 4 ವಿಸೇಬಿ 2018, ದಿನಾಂಕ:01.02.2018ನ್ನು ಹಿಂಪಡೆಯಲು ಸರ್ಕಾರವು ನಿರ್ಧರಿಸಿದೆ. ಅದರಂತೆ ಈ ಮುಂದಿನ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 132 ವಿಸೇಬಿ 2019, ದಿನಾಂಕ: 13.04.2022.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಸಿ.ವಿ ಶ್ರೀನಿವಾಸ್, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಬೇಡರೆಡ್ಡಿಹಳ್ಳಿ ಗ್ರಾಮ ಪಂಚಾಯಿತಿ, ಚಿತ್ರದುರ್ಗ ಜಿಲ್ಲೆ (ಪ್ರಸ್ತುತ ನಿವೃತ್ತ ಕಾರ್ಯನಿರ್ವಾಹಕ ಅಧಿಕಾರಿ) ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಪ್ರಕರಣವನ್ನು ಕರ್ನಾಟಕ ನಾಗರೀಕ ಸೇವಾ ನಿಯಮಗಳು, 1958ರ ನಿಯಮ 214 (2) (ಬಿ) (i) ರನ್ವಯ ಮಾನ್ಯ ಉಪ ಲೋಕಾಯುಕ್ತ–2 ರವರಿಗೆ ವಹಿಸಲಾಗಿದ್ದ **ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 4 ವಿಸೇಬಿ 2018, ದಿನಾಂಕ: 01.02.2018ನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಿಂಪಡೆದು** ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

13/04/2022

**(ಬಾಲಪ್ಪ)**
ಸರ್ಕಾರದ ಅಧೀನ ಕಾರ್ಯದರ್ಶಿ (ಸೇ–ಬಿ&ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

13/4/2022

**ಇವರಿಗೆ,**

1. ಮಹಾಲೇಖಪಾಲರು, (ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬಹುಮಹಡಿಗಳ ಕಟ್ಟಡ, ಬೆಂಗಳೂರು–01.
3. ಅಪರ ನಿಬಂಧಕರು (ವಿಚಾರಣೆಗಳು–9), ಕರ್ನಾಟಕ ಲೋಕಾಯುಕ್ತ, ಬಹುಮಹಡಿಗಳ ಕಟ್ಟಡ, ಬೆಂಗಳೂರು–01.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿತ್ರದುರ್ಗ ಜಿಲ್ಲೆ.
5. ಆಪಾದಿತ ಅಧಿಕಾರಿ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಿತ್ರದುರ್ಗ ಇವರ ಮುಖಾಂತರ).
6. ಸರ್ಕಾರಿ ವಕೀಲರು, ಅಡ್ವೋಕೇಟ್ ಜನರಲ್‌ರವರ ಕಛೇರಿ, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಬೆಂಗಳೂರು.
7. ಮೇಲ್ವಿಚಾರಕರು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
8. ಮಾಹಿತಿ ಕೇಂದ್ರ/ಶಾಖಾ ರಕ್ಷಕ ಕಡತ/ಹೆಚ್ಚುವರಿ ಪ್ರತಿ.

**ಪ್ರತಿ ಮಾಹಿತಿಗಾಗಿ:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ ಉಪ ಕಾರ್ಯದರ್ಶಿ (ಆಡಳಿತ–2) ರವರ ಆಪ್ತ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.

*****